# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಕೇಂದ್ರ ಪುರಸ್ಕೃತ ಮೀನುಗಾರರ ಸಾಮೂಹಿಕ ಅಪಘಾತ ವಿಮಾ ಯೋಜನೆ / ಪ್ರಧಾನ ಮಂತ್ರಿ ಸುರಕ್ಷಾ ಭೀಮಾ ಯೋಜನೆಯಡಿ ರಾಜ್ಯದ ಪಾಲಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:- (1) ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 27035/19/2015-FY(IV) ದಿನಾಂಕ: 28-09-2017.

(2) ಆದೇಶ ಸಂಖ್ಯೆ: ಪಸಂಮೀ/52/ಮೀಇಯೋ/2019 ದಿನಾಂಕ: 15-04-2018.

(3) ಪತ್ರ ಸಂಖ್ಯೆ: ಡಿಎಫ್/26/ಮೀಸಾಕ/2019, ದಿನಾಂಕ: 09-04-2019 ಮತ್ತು 10-05-2019

******

## ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಕೇಂದ್ರ ಸರ್ಕಾರದ ಪತ್ರದಲ್ಲಿ, ಕೇಂದ್ರ ಪುರಸ್ಕೃತ ಮೀನುಗಾರರ ಸಾಮೂಹಿಕ ಅಪಘಾತ ವಿಮಾ ಯೋಜನೆ / ಪ್ರಧಾನ ಮಂತ್ರಿ ಸುರಕ್ಷಾ ಭೀಮಾ ಯೋಜನೆಯನ್ನು 2019-20ನೇ ಸಾಲಿಗೆ ಮುಂದುವರೆಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಆದೇಶದಲ್ಲಿ, ಮೀನುಗಾರಿಕೆ ಇಲಾಖೆಯ ಚಾಲ್ತಿಯಲ್ಲಿರುವ ರಾಜ್ಯ ವಲಯ, ಕೇಂದ್ರ ವಲಯ ಮತ್ತು ಕೇಂದ್ರ ಪುರಸ್ಕೃತ, ಜಿಲ್ಲಾ ಪಂಚಾಯತ್ ಎಲ್ಲಾ ಯೋಜನೆಗಳನ್ನು 2019-20ನೇ ಸಾಲಿಗೆ ಮುಂದುವರಿಸಿ ಆದೇಶಿಸಿದೆ.

ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ನಿರ್ದೇಶಕರು, ಮೀನುಗಾರಿಕೆ ಇಲಾಖೆರವರ ಪತ್ರದಲ್ಲಿ, ಪ್ರಧಾನ ಮಂತ್ರಿ ಸುರಕ್ಷಾ ಭೀಮಾ ಯೋಜನೆಯಡಿ ವಿಮೆ ಅವಧಿಯು ದಿನಾಂಕ: 01-06-2019 ರಿಂದ 31-05-2020 ರವರೆಗೆ ಇರುವುದರಿಂದ, 2019-20ನೇ ಸಾಲಿನ ವಿಮೆಯನ್ನು ದಿನಾಂಕ: 01-06-2019 ರೊಳಗೆ ನವೀಕರಿಸಬೇಕಾಗಿರುವುದರಿಂದ, ರಾಜ್ಯದ ಪಾಲಿನ ಅನುದಾನ ರೂ.12,28,134-00 ಗಳನ್ನು ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು ಇವರು ರಾಜ್ಯ ಹುಜೂರ್ ಖಜಾನೆಯಿಂದ "ಸಾದಿಲ್ವಾರು" ಬಿಲ್ಲು ಮೂಲಕ ಸೆಳೆದು NEFT/RTGS ಮುಖಾಂತರ ವ್ಯವಸ್ಥಾಪಕ ನಿರ್ದೇಶಕರು, ರಾಷ್ಟ್ರೀಯ ಮೀನುಗಾರರ ಸಹಕಾರ ಸಂಘಗಳ ಮಹಾ ಮಂಡಳಿ(ನಿ) (Managing Director, National Federation of Fishermen's Co-operatives Ltd., New Delhi- FISHCOPFED) ಇವರಿಗೆ ವರ್ಗಾಯಿಸಲು ಫಡರಿ ಮೊತ್ತವನ್ನು ಬಿಡುಗಡೆಗೊಳಿಸುವಂತೆ ಕೋರಿರುತ್ತಾರೆ.

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಪಸಂಮೀ/53/ಮೀಇಯೋ/2019, ಬೆಂಗಳೂರು ದಿನಾಂಕ: 21-05-2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2019-20ನೇ ಸಾಲಿನ ಆಯವ್ಯಯದಲ್ಲಿ ಕೇಂದ್ರ ಪುರಸ್ಕೃತ - ಸಾಮೂಹಿಕ ಅಪಘಾತ ವಿಮಾ ಯೋಜನೆ / ಪ್ರಧಾನ ಮಂತ್ರಿ ಸುರಕ್ಷಾ ಭೀಮಾ ಯೋಜನೆಯಡಿ ಲೆಕ್ಕ ಶೀರ್ಷಿಕೆ 2405-00-120-0-07 ಮೀನುಗಾರರ ಕಲ್ಯಾಣ-106-ಸಹಾಯಧನ (ಯೋಜನೆ) ಅಡಿಯಲ್ಲಿ ಒದಗಿಸಿರುವ ರಾಜ್ಯದ ಪಾಲಿನ ಅನುದಾನ ರೂ.13.00 ಲಕ್ಷಗಳಲ್ಲಿ ರಾಜ್ಯದ ಕಾರ್ಯನಿರತ 2,04,689 ಮೀನುಗಾರರ ರಾಜ್ಯದ ಪಾಲಿನ ವಿಮಾ ಮೊತ್ತ ರೂ.12,28,134-00 (ಹನ್ನೆರಡು ಲಕ್ಷದ ಇಪ್ಪತ್ತೆಂಟು ಸಾವಿರದ ನೂರ ಮೂವತ್ತನಾಲ್ಕು ರೂಪಾಯಿಗಳು ಮಾತ್ರ)ಗಳನ್ನು ಮೀನುಗಾರಿಕೆ ನಿರ್ದೇಶಕರು "ಸಾದಿಲ್ವಾರು" ಬಿಲ್ಲು ಮೂಲಕ ಸೆಳೆದು NEFT / RTGS ಮುಖಾಂತರ ವ್ಯವಸ್ಥಾಪಕ ನಿರ್ದೇಶಕರು, ರಾಷ್ಟ್ರೀಯ ಮೀನುಗಾರರ ಸಹಕಾರ ಸಂಘಗಳ ಮಹಾಮಂಡಳಿ (ನಿ) (Managing Director, National Federation of Fishermen's Co-operative Ltd., New Delhi - FISHCOPFED), ನವದೆಹಲಿ ಇವರಿಗೆ ವರ್ಗಾಯಿಸಲು ಅನುಮತಿ ನೀಡಲಾಗಿದೆ.

ಸದರಿ ವೆಚ್ಚವನ್ನು ಲೆಕ್ಕ ಶೀರ್ಷಿಕೆ "2405-ಮೀನುಗಾರಿಕೆ-00-120-ಮೀನುಗಾರರ ಸಹಕಾರ ಸಂಸ್ಥೆಗಳು-0-07-ಮೀನುಗಾರರ ಕಲ್ಯಾಣ-106-ಸಹಾಯಧನ (ಯೋಜನೆ)" ಅಡಿಯಲ್ಲಿ 2019-20ನೇ ಸಾಲಿನಲ್ಲಿ ಒದಗಿಸಿರುವ ರಾಜ್ಯದ ಪಾಲಿನ ಅನುದಾನ ರೂ.13.00 ಲಕ್ಷಗಳಿಂದ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ/01/ಟಿಎಫ್‌ಪಿ/2019, ದಿನಾಂಕ: 03-04-2019 ರಲ್ಲಿ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ವಿತ್ತಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

21/5/19

(ರಶ್ಮಿ ಶ್ರೀಕಾಂತ ಗಜರೆ)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

21/5/19
ಸರ್ಕಾರದ ಅಧೀನ ಕಾರ್ಯದರ್ಶಿ
ಪ ಮತ್ತು ಮೀ ಇಲಾಖೆ ( ಮೀನುಗಾರಿಕೆ )

21/05/19

ಇವರಿಗೆ:

1) ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)(ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.

2) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
4) ಜಂಟಿ ನಿರ್ದೇಶಕರು, ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
5) ವ್ಯವಸ್ಥಾಪಕ ನಿರ್ದೇಶಕರು, ರಾಷ್ಟ್ರೀಯ ಮೀನುಗಾರರ ಸಹಕಾರ ಸಂಘಗಳ ಮಹಾಮಂಡಳಿ ನಿಯಮಿತ, ನವದೆಹಲಿ.
6) ಆಂತರಿಕ ಆರ್ಥಿಕ ಸಲಹೆಗಾರರು, ಕೃ.ತೋ. ಮತ್ತು ಪ.ಸಂ.ಮೀ. ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನಸೌಧ, ಬೆಂಗಳೂರು.
8) ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
9) ಶಾಖಾ ರಕ್ಷಾ ಕಡತ/ಹೆಚ್ಚಿನ ಪ್ರತಿಗಳು/ಕಂಪೆಂಡಿಯಂ-ಸಮನ್ವಯ.